# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 182 ಸೇನೀ 2011

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ.22.03.2017

## ಸುತ್ತೋಲೆ

ವಿಷಯ: ಸಿವಿಲ್ ಅಪೀಲ್ ಸಂಖ್ಯೆ: 2368/2011– ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ವೃಂದದ ಮುಂಬಡ್ತಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯುವ ಬಗ್ಗೆ

*~*~*~*

ದಿನಾಂಕ: 27.04.1978ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೇಹಿಮ 1977ರ ಆದೇಶದನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ವೃಂದದ ಹುದ್ದೆಗಳಿಗೆ (ಗ್ರೂಪ್–ಎ ಕಿರಿಯ ಶ್ರೇಣಿಯವರೆಗೆ) ಮುಂಬಡ್ತಿಯಲ್ಲಿ ಮೀಸಲಾತಿಯನ್ನು ನೀಡಲಾಗುತ್ತಿದೆ. "The Karnataka Determination of Seniority of the Government Servants Promoted on the Basis of Reservation (to the Posts in the Civil Services of the State) Act, 2002"ರ ಸೆಕ್ಷನ್ 4ರನ್ವಯ ಮುಂಬಡ್ತಿ ಹೊಂದಿದ ವೃಂದದಲ್ಲಿ ಜೇಷ್ಠತೆಯನ್ನು ನಿಗದಿಪಡಿಸಲಾಗುತ್ತಿದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 9.02.2017ರ ತೀರ್ಪಿನಲ್ಲಿ "The Karnataka Determination of Seniority of the Government Servants Promoted on the Basis of Reservation (to the Posts in the Civil Services of the State) Act, 2002"ರ ಸೆಕ್ಷನ್ 3 ಮತ್ತು 4ನ್ನು "*ultra vires* Articles 14 and 16 of the Constitution" ಎಂದು ಆದೇಶಿಸಿರುತ್ತದೆ ಹಾಗೂ ಜೇಷ್ಠತಾ ಪಟ್ಟಿಯನ್ನು ಮೂರು ತಿಂಗಳೊಳಗಾಗಿ ಪರಿಷ್ಕರಿಸಲು ನಿರ್ದೇಶನ ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಿಗೂ ಮುಂದಿನ ಆರು ತಿಂಗಳ ಅವಧಿಗೆ ಮುಂಬಡ್ತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಎಲ್ಲಾ ನೇಮಕಾತಿ ಪ್ರಾಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ /ಮಂಡಳಿಗಳು/ ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ ಈ ಕುರಿತು ಸೂಕ್ತ ಸೂಚನೆಗಳನ್ನು ನೀಡುವಂತೆ ತಿಳಿಸಲಾಗಿದೆ.

Mangala G.S 22/3/17

(ಡಾ: ಮಂಗಳ.ಜಿ.ಎಸ್)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-1) ಇವರ ಕಛೇರಿಗೆ ಒದಗಿಸುವುದು.

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
3. ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
5. ರಾಜ್ಯಪಾಲರ ಅಪರ ಕಾರ್ಯದರ್ಶಿಗಳು
6. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
7. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
8. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-560 001
9. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್
10. ಕಾರ್ಯದರ್ಶಿಯವರು, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು-560001.
11. * ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01
12. * ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು-560 001
13. * ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಇಂದಿರಾನಗರ, ಬೆಂಗಳೂರು-560038.
14. * ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-560 001
15. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(* ಮುಖ ಪತ್ರದೊಂದಿಗೆ)